ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ ಎಂ ಎಫ್ ಸಿ ರವರ ನ್ಯಾಯಾಲಯ,
ತಿ ನರಸೀಪುರ

<u>ಸಿ ಸಿ ಸಂಖ್ಯೆ: 101/2023</u>

**<u>ದೋಷಾರೋಪಣೆ</u>**

ಶ್ರೀ ಹನುಮಂತ ಜಿ.ಹೆಚ್. ಬಿ.ಎ.ಎಲ್., ಎಲ್‌ಎಲ್.ಎಮ್., ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ ಎಂ ಎಫ್ ಸಿ, ತಿ ನರಸೀಪುರ ಆದ ನಾನು

ನಾಗೇಶ್ ಬಿನ್ ಮಣಿನಯ್ಯ
45 ವರ್ಷ, ವಾಸಃ ಕಳ್ಳಿಪುರ ಗ್ರಾಮ,
ತಿ ನರಸೀಪುರ ತಾಲ್ಲೂಕು, ಮೈಸೂರು ಜಿಲ್ಲೆ.

ಎಂಬ ಆರೋಪಿತರಾದ ನಿಮ್ಮ ಮೇಲೆ ಈ ಕೆಳಗಿನಂತೆ ಹೊರಿಸುವ ದೋಷಾರೋಪ ಎನೆಂದರೇಃ-

ಮೊದಲನೆಯದಾಗಿ, ದಿಃ 25.07.2022 ರಂದು ಮಧ್ಯಾಹ್ನ 1.30 ಗಂಟೆ ಸಮಯದಲ್ಲಿ, ತಿ.ನರಸೀಪುರ ಪೋಲಿಸ್ ಠಾಣಾ ವ್ಯಾಪ್ತಿಯ, ತಿ. ನರಸೀಪುರ ತಾಲ್ಲೂಕಿನ ಕಳ್ಳಿಪುರ ಗ್ರಾಮದ ಪರಿಶಿಷ್ಟ ಕಾಲೋನಿಯ ಬಾಬುಜಗಜೀವನರಾಮ್ ಭವನದ ಬಳಿ ಇರುವ ರಸ್ತೆಯ ಬಳಿ, ಆರೋಪಿಯಾದ ನೀವು ಚಾಸಾ-2/ರಾಜೇಶರವರ ಜೊತೆ ತೀಟೆ ಜಗಳ ತೆಗೆದು ಅವರನ್ನು ಉದ್ದೇಶಿಸಿ, "ಬೋಳಿ ಮಗನೇ, ಸೂಳೆ ಮಗನೇ" ಎಂಬ ಅವಾಚ್ಯ ಶಬ್ದಗಳಿಂದ ಬೈಯ್ದು ಸಾರ್ವಜನಿಕ ನೆಮ್ಮದಿಗೆ ಭಂಗ ಉಂಟು ಮಾಡುವ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 504 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಎಸಗಿದ್ದು, ಅದು ನನ್ನ ಸಂಜ್ಞೆಯಲ್ಲಿ ಬರುತ್ತದೆ.

ಎರಡನೇಯದಾಗಿ, ಮೇಲೆ ಹೇಳಿದ ದಿನ, ಸಮಯ ಮತ್ತು ಸ್ಥಳದಲ್ಲಿ, ಆರೋಪಿತರಾದ ನೀವು ಚಾಸಾ–2 ರವರನ್ನು ಅಡ್ಡಗಟ್ಟಿ ಅಕ್ರಮ ತಡೆ ಉಂಟು ಮಾಡುವ ಮೂಲಕ ಭಾರತೀಯ ದಂಡ ಸಂಹಿತೆ ಕಲಂ. 341 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಎಸಗಿದ್ದು, ಅದು ನನ್ನ ಸಂಜ್ಞೆಯಲ್ಲಿ ಬರುತ್ತದೆ.

ಮೂರನೇಯದಾಗಿ, ಮೇಲೆ ಹೇಳಿದ ದಿನ, ಸಮಯ ಮತ್ತು ಸ್ಥಳದಲ್ಲಿ, ಆರೋಪಿತರಾದ ದೊಣ್ಣೆಯಿಂದ ಚಾಸಾ–2 ರವರ ಎಡ ಕೈಗೆ ಹೊಡೆದು ಮೂಳೆ ಮುರಿದು ತೀವ್ರ ಸ್ವರೂಪದ ಗಾಯ ಉಂಟು ಮಾಡುವ ಮೂಲಕ ಭಾರತೀಯ ದಂಡ ಸಂಹಿತೆ ಕಲಂ. 326 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಎಸಗಿದ್ದು, ಅದು ನನ್ನ ಸಂಜ್ಞೆಯಲ್ಲಿ ಬರುತ್ತದೆ.

ನಾನು ಈ ಮೇಲಿನ ದೋಷಾರೋಪಣೆಗಳ ಮೇಲೆ ಈ ನ್ಯಾಯಾಲಯದ ವಿಚಾರಣೆಗೆ ನೀವು ಗುರಿಯಾಗಬೇಕೆಂದು ನಿರ್ದೇಶಿಸುತ್ತೇನೆ.

**ದಿನಾಂಕ:** 05.01.2024

**ಹಿರಿಯ ಸಿವಿಲ್ ನ್ಯಾಯಾಧೀಶರು**
**ಮತ್ತು ಜೆಎಂಎಫ್‌ಸಿ, ಟಿ ನರಸೀಪುರ.**

ಹಿರಿಯ ಸಿವಿಲ್ ನ್ಯಾಯಾಧೀಶರ ಮತ್ತು ಜೆಎಂಎಫ್‌ಸಿ ರವರ ನ್ಯಾಯಾಲಯ,

ತಿ ನರಸೀಪುರ

<u>ಸಿ ಸಿ ಸಂಖ್ಯೆ: 101/2023</u>

**<u>ದೋಷಾರೋಪಣೆ</u>**

ನಾಗೇಶ್ ಬಿನ್ ಮಣಿನಯ್ಯ
45 ವರ್ಷ, ವಾಸಃ ಕಳ್ಳಿಪುರ ಗ್ರಾಮ,
ತಿ ನರಸೀಪುರ ತಾಲ್ಲೂಕು, ಮೈಸೂರು ಜಿಲ್ಲೆ.

ಪ್ರಶ್ನೆಃ ನಿಮ್ಮ ಮೇಲೆ ಹೊರಿಸಲಾದ ದೋಷಾರೋಪಣೆ ಕೇಳಿದ್ದೀರಾ? ಅದು ನಿಮಗೆ ತಿಳಿಯಿತೇ?
ಉತ್ತರಃ ಹೌದು

ಪ್ರಶ್ನೆಃ ನೀವು ಸದರಿ ದೋಷಾರೋಪವನ್ನು ಒಪ್ಪಿಕೊಳ್ಳುತೀರಾ? ಅಥವಾ ನಿಮ್ಮ ವಿರುದ್ಧ ವಿಚಾರಣೆ ನಡೆಯಬೇಕೇ?

ಉತ್ತರಃ ವಿಚಾರಣೆಯಾಗಬೇಕು.

(ಮೇಲಿನ ದೋಷಾರೋಪಣೆಯನ್ನು ಆಪಾದಿತರಿಗೆ ತಿಳಿದಿರುವ ಭಾಷೆಯಲ್ಲಿ ಓದಿ, ತಿಳಿಸಿ ಹೇಳಿ ಅವರು ನೀಡಿದ ಉತ್ತರವನ್ನು ಬರೆದುಕೊಂಡಿರುವುದಾಗಿ ಈ ಮೂಲಕ ದೃಢೀಕರಿಸಲಾಗಿದೆ.)

**ದಿನಾಂಕಃ** 05.01.2024

**ಹಿರಿಯ ಸಿವಿಲ್ ನ್ಯಾಯಾಧೀಶರು**
**ಮತ್ತು ಜೆಎಂಎಫ್‌ಸಿ, ಟಿ ನರಸೀಪುರ.**